ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

2. ಶ್ರೀ ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2014

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಶ್ರೀ ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು. ಮಾನ್ಯ ಸಚಿವರೆ ವಿಧೇಯಕಕ್ಕೆ ಸಂಬಂಧಿಸಿದಂತೆ ತಾವು explain ಮಾಡಿ.

(ಬಿಜೆಪಿ ಸದಸ್ಯರು ಸದನದ ಬಾವಿಯಲ್ಲಿ de-notification ಮಾಡಿರುವ ಸರ್ಕಾರಕ್ಕೆ ಧಿಕ್ಕಾರ ಎಂಬ ಘೋಷಣೆಯನ್ನು ಕೂಗುತ್ತಿದ್ದರು)